ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 23-9-2016

# ಪತ್ರಿಕಾ ಆಮಂತ್ರಣ

1. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮನೆಯಂಗಳದಲ್ಲಿ ಮಾತುಕತೆ
   ತಿಂಗಳ ಅತಿಥಿಯಾಗಿ : ಡಾ. ಎ. ವಿ. ಪ್ರಸನ್ನ, ಗಮಕ ವ್ಯಾಖ್ಯಾನಕಾರರು,
   ದಿನಾಂಕ: 24-09-2016 ಶನಿವಾರ ಸಂಜೆ 4-00 ಗಂಟೆಗೆ
   ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

ಮಾಧ್ಯಮದವರ ನಮ್ರ ಗಮನಕ್ಕೆ

## ವಿಶೇಷ ಪತ್ರಿಕಾ ಆಮಂತ್ರಣ

ಕಾವೇರಿ ಕೊಳ್ಳದ ಪ್ರದೇಶದಲ್ಲಿ ವಸ್ತುಸ್ಥಿತಿಯನ್ನು ಮನವರಿಕೆ ಮಾಡಿಕೊಡಲು ಕಾವೇರಿ ನೀರಾವರಿ ನಿಗಮ ನಿಯಮಿತವು ಮಾಧ್ಯಮದವರಿಗಾಗಿ ಅಧ್ಯಯನ ಪ್ರವಾಸವನ್ನು ಆಯೋಜಿಸಿದೆ. ಸೆಪ್ಟೆಂಬರ್ 25 ರಂದು ಬೆಳಿಗ್ಗೆ 7-00 ಗಂಟೆಗೆ ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣಾದಿಂದ ಈ ಪ್ರವಾಸವು ಪ್ರಾರಂಭವಾಗಲಿದೆ.

ಕಾವೇರಿ ಕೊಳ್ಳದ ಜಲಾಶಯಗಳು, ಅಚ್ಚುಕಟ್ಟು ಪ್ರದೇಶಗಳು, ಅಲ್ಲಿನ ಕೃಷಿ ಕ್ಷೇತ್ರದ ವಾಸ್ತವಿಕ ಚಿತ್ರಣದ ದರ್ಶನದ ಜೊತೆ ಜೊತೆಗೆ ಸ್ಥಳೀಯ ಅಧಿಕಾರಿಗಳೂ ಹಾಗೂ ರೈತರನ್ನು ಮಾಧ್ಯಮದವರು ಸಂದರ್ಶಿಸಬಹುದಾಗಿದೆ.

ಸೆಪ್ಟೆಂಬರ್ 25 ರಂದು ಯಗಚಿ ಹಾಗೂ ಹೇಮಾವತಿ ಜಲಾಶಯ ಹಾಗೂ ಅಚ್ಚುಕಟ್ಟು ಪ್ರದೇಶಗಳ ವೀಕ್ಷಣೆ. ಗೊರೂರಿನಲ್ಲಿ ವಾಸ್ತವ್ಯ.

ಸೆಪ್ಟೆಂಬರ್ 26 ರಂದು ಹಾರಂಗಿ ಹಾಗೂ ಕೃಷ್ಣರಾಜಸಾಗರ ಜಲಾಶಯ ಹಾಗೂ ಅಚ್ಚುಕಟ್ಟು ಪ್ರದೇಶಗಳ ವೀಕ್ಷಣೆ. ಬೆಂಗಳೂರಿಗೆ ವಾಪಸ್.

ಮುದ್ರಣ ಮಾಧ್ಯಮದ ಪ್ರಮುಖ ದಿನಪತ್ರಿಕೆಗಳು ಹಾಗೂ ವಿದ್ಯುನ್ಮಾನ ಮಾಧ್ಯಮದ ಪ್ರಮುಖ ಸುದ್ದಿ ವಾಹಿನಿಗಳನ್ನು ಪ್ರತಿನಿಧಿಸುವ ಮಾನ್ಯತೆ ಪಡೆದ ಪತ್ರಕರ್ತರು ಹಾಗೂ ಛಾಯಾಗ್ರಾಹಕರು ಈ ಅಧ್ಯಯನ ಪ್ರವಾಸದಲ್ಲಿ ಪಾಲ್ಗೊಳ್ಳಲು ಕೋರಲಾಗಿದೆ.

ಪ್ರವಾಸ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಮುಖ್ಯಮಂತ್ರಿಯವರ ಮಾಧ್ಯಮ ಸಮನ್ವಯಕರಾದ ಶ್ರೀ ಕೆ. ವಿ. ಪ್ರಭಾಕರ್ ಅವರನ್ನು ಸಂಚಾರಿ ದೂರವಾಣಿ ಸಂಖ್ಯೆ : 98450 84154 ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಕೆ. ಪಿ. ಪುಟ್ಟಸ್ವಾಮಯ್ಯ ಅವರನ್ನು ಸಂಚಾರಿ ದೂರವಾಣಿ ಸಂಖ್ಯೆ : 94808 41253 ಮೂಲಕ

**ಸಂಪರ್ಕಿಸಿ ಪಡೆಯಬಹುದು. ಅಲ್ಲದೆ, ಪ್ರವಾಸಕ್ಕೆ ಆಗಮಿಸುವವರ ಹೆಸರು ಹಾಗೂ ವಿವರಗಳನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಯ ವಾರ್ತಾ ಸಹಾಯಕರಾದ ಶ್ರೀಮತಿ ಬಿ. ಜಿ. ಪೂರ್ಣಿಮಾ ಅವರಲ್ಲಿ ಸೆಪ್ಟೆಂಬರ್ 24 ಶನಿವಾರ ಮಧ್ಯಾಹ್ನ 1-00 ಗಂಟೆಯೊಳಗೆ ನೋಂದಾಯಿಸಿಕೊಳ್ಳಬಹುದು.**

**ನಿರ್ದೇಶಕರ ಪರವಾಗಿ**

ಪತ್ರಿಕಾ ಪ್ರಕಟಣೆ

## ಚಿತ್ರಕಲಾ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ

**ಬೆಂಗಳೂರು ಸೆಪ್ಟೆಂಬರ್ 23: (ಕರ್ನಾಟಕ ವಾರ್ತೆ)**

**ಕರ್ನಾಟಕ ಲಲಿತಕಲಾ ಅಕಾಡೆಮಿಯು ಚಿತ್ರಕಲೆಯನ್ನು ಉತ್ತೇಜಿಸುವ ದೃಷ್ಠಿಯಿಂದ ಚಿತ್ರಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದಿನ ಕೋರ್ಸಿನಲ್ಲಿ/ವರ್ಷದಲ್ಲಿ ಹೆಚ್ಚು ಅಂಕ ಪಡೆದಿರುವ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಮೆರಿಟ್ ವಿದ್ಯಾರ್ಥಿ ವೇತನವನ್ನು ನೀಡಲು ನಿರ್ಧರಿಸಿದೆ.**

**ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಅಂಗೀಕೃತಗೊಂಡ ಚಿತ್ರಕಲಾ ದೃಶ್ಯಕಲಾ ಶಿಕ್ಷಣದ ಕಾಲೇಜುಗಳು, ಸರ್ಕಾರದ ಮಾನ್ಯತೆ ಪಡೆದ ಗುರುಕುಲ ಪದ್ದತಿಯಲ್ಲಿ ಶಿಕ್ಷಣ ಪಡೆಯುತ್ತಿರುವವರು, ಪದವಿ/ಸ್ನಾತಕೋತ್ತರ ಪದವಿಗಳಲ್ಲಿ ಚಿತ್ರಕಲಾ ವಿಷಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.**

ಅರ್ಜಿದಾರರು ಕರ್ನಾಟಕದವರಾಗಿದ್ದು, ವಯೋಮಿತಿ 16 ರಿಂದ 25 ವರ್ಷ ಒಳಗಿರಬೇಕು. ಆಸಕ್ತಿಯುಳ್ಳ ವಿದ್ಯಾರ್ಥಿಗಳು ತಮ್ಮ ಪೂರ್ಣ ವಿವರಗಳೊಂದಿಗೆ ಪಾಸ್‌ಪೋರ್ಟ್ ಅಳತೆಯ ಎರಡು ಭಾವಚಿತ್ರ ಹಾಗೂ ಕೃತಿಗಳ ಕ್ಯಾಬಿನೆಟ್ ಸೈಜಿನ ಎರಡು ಛಾಯಾಚಿತ್ರಗಳು ಸೇರಿದಂತೆ ಈ ಹಿಂದೆ ವಿದ್ಯಾರ್ಥಿ ವೇತನ ಪಡೆದಿಲ್ಲವೆಂದು ಇದೇ ಮೊದಲ ಸಲವೆಂದು ಸಂಬಂಧಪಟ್ಟ ಸಂಸ್ಥೆಯ ಮುಖ್ಯಸ್ಥರ ದೃಢೀಕರಣದೊಂದಿಗೆ ಅಕ್ಟೋಬರ್ 23 ರೊಳಗಾಗಿ ಅಕಾಡೆಮಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇವರಿಗೆ ತಲುಪಿಸಲು ಕೋರಿದೆ. ನಂತರ ಬಂದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.lalitkalakarnataka.org. email: kla.karnataka@gmail.com ಹಾಗೂ ದೂರವಾಣಿ ಸಂಖ್ಯೆ 080 – 22480297 ಸಂಪರ್ಕಿಸಬಹುದಾಗಿದೆ.

ಹೆಚ್‌ಕೆ:ಪಿಎಸ್‌ಐ:ಜಿಪಿಆರ್.

## ಅಗಲಿದ ಗಣ್ಯರಿಗೆ ಸದನದಲ್ಲಿ ಸಂತಾಪ

**ಬೆಂಗಳೂರು ಸೆಪ್ಟೆಂಬರ್ 23: (ಕರ್ನಾಟಕ ವಾರ್ತೆ)**

**ಇಂದು ನಡೆದ ವಿಶೇಷ ಅಧಿವೇಶನದ ಪ್ರಾರಂಭಕ್ಕೂ ಮುನ್ನ ವಿಧಾನ ಪರಿಷತ್ ಸದಸ್ಯರು ಹಾಗೂ ಮಾಜಿ ಸಚಿವರಾಗಿದ್ದ ಬಸವರಾಜ ಹಾವಗಿಯಪ್ಪ ಪಾಟೀಲ್ ಹಾಗೂ ವಿಧಾನ ಪರಿಷತ್ತಿನ ಮತ್ತು ರಾಜ್ಯಸಭೆಯ ಮಾಜಿ ಸದಸ್ಯರಾದ ಎಫ್. ಎಂ. ಖಾನ್, ಖ್ಯಾತ ನೀರಾವರಿ ತಜ್ಞ ಕೆ. ಸಿ. ರೆಡ್ಡಿ, ಜಮ್ಮು ಕಾಶ್ಮೀರ ಗಡಿ ಭಾಗದಲ್ಲಿ ಸಂಭವಿಸಿದ ಬಾಂಬ್ ಸ್ಫೋಟ್‌ದಲ್ಲಿ ಹಸನ್‌ಸಾಬ್ ಇಮಾಮ್‌ಸಾಬ್ ಖುದಾವಂದ್, ಬಸವರಾಜ ಚನ್ನಪ್ಪ ಪಾಟೀಲ್ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಯಶವಂತ ಬಿ. ಹೆರವಟ್ಟಾ ಅವರುಗಳ ನಿಧನಕ್ಕೆ ಸದನ ಒಂದು ನಿಮಿಷ ಮೌನಾಚರಣೆಮಾಡಿ ಸಂತಾಪ ಸೂಚಿಸಿತು.**

ಕೆಎನ್‌ವಿ:ಜಿಪಿಆರ್.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು ಸೆಪ್ಟೆಂಬರ್ 23: (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:25-09-2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಎಸ್. ಕುಮಾರ್ ಮತ್ತು ತಂಡ , ರಾಮನಗರ ರವರಿಂದ **ಜಾನಪದ ಗೀತೆಗಳ** ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಎನ್. ಮಹೇಂದ್ರ ಮತ್ತು ತಂಡ, ಮಂಡ್ಯ ರವರಿಂದ ಸುಗುಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ), ಲಾಲ್‌ಬಾಗ್, ಬೆಂಗಳೂರು ರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

5) ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರು ರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

6) ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ , ಲಾಲ್‌ಬಾಗ್ , ಬೆಂಗಳೂರು ರವರು ವಿವಿಧ ಅಲಂಕಾರಿಕ ಗಿಡಗಳ ಮಾರಾಟವನ್ನು ವಿಧಾನಸೌಧ ಮತ್ತು ಹೈಕೋರ್ಟ್ ಮುಂಭಾಗದ ಮೆಟ್ರೋ ನಿಲ್ದಾಣದ ಹತ್ತಿರ ಕೈಗೊಳ್ಳುತ್ತಾರೆ.

7) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ** ಸಹಯೋಗದೊಂದಿಗೆ ಶ್ರೀಮತಿ. ಕಾವ್ಯ ಚಂದ್ರಶೇಖರ್ ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀ.ವಾಣಿ ವಿದ್ಯಾ ಕೇಂದ್ರ , ರಾಜಾಜಿನಗರ, ಬೆಂಗಳೂರು ಶಾಲಾ ವಿದ್ಯಾರ್ಥಿನಿಯಾದ ಕುಮಾರಿ. ಆಶಾ ಶೇಷಾದ್ರಿ ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ** ಸಹಯೋಗದೊಂದಿಗೆ ನೃತ್ಯ ಗಂಗೋತ್ರಿ ನೃತ್ಯ ಶಾಲೆಯ ಕಲಾವಿದರುಗಳಿಂದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 10.00 ಗಂಟೆಯಿಂದ 11.00 ಗಂಟೆಯವರೆಗೆ **World Alzheimer's & Related Disorders Society of India , ಬೆಂಗಳೂರು ಸಂಸ್ಥೆಯ ವತಿಯಿಂದ ಸಾರ್ವಜನಿಕರಿಗೆ ನೆನಪಿನ ಶಕ್ತಿಯ (ಮರೆವು) ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- **ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ Soham Healing Center, ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಸಿದ್ಧಪಡಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**